# ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.4/2021

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಸಂಗೀತಾ | CW: 10 | PW: 6 |
| ಗಂಡನ ಹೆಸರು | : | ಬಸವರಾಜಪ್ಪ | | |
| ವಯಸ್ಸು | : | 36 | | |
| ವೃತ್ತಿ | : | ಕೂಲಿ | | |
| ವಾಸಸ್ಥಳ | : | ಸಿದ್ದಾಪುರ ಗ್ರಾಮ | | |

ದಿನಾಂಕಃ 26.03.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಚಾಸಾ 1 ಮತ್ತು 11 ರವರು ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಪೋಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು 2 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಸ್ಥಳ ಪಂಚನಾಮೆಯಲ್ಲಿ ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸ್ಥಳಪಂಚನಾಮೆಯನ್ನು ನಿಪಿ 4 ಎಂದು, ಸಾಕ್ಷಿಯ ಸಹಿಯನ್ನು ನಿಪಿ 4(ಎ) ಎಂದು

ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ನಿಪಿ 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರುತಿಸಲಾಯಿತು. 2 ಫೋಟೋಗಳನ್ನು ನಿಪಿ 6 ಮತ್ತು 7 ಎಂದು, ಸಿಡಿಯನ್ನು ನಿಪಿ 8 ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–

ದಿಃ 07.06.2020 ರಂದು ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸ 1 ರವರು ಸ್ಥಳ ತೋರಿಸಿದ ಮೇರೆಗೆ ಬೆಳಗ್ಗೆ 10 ರಿಂದ 11 ರವರೆಗೆ ನಿಪಿ 4 ರಂತೆ ನನ್ನ ಹಾಗೂ ಚಾಸಾ 11 ರವರ ಸಮಕ್ಷಮದಲ್ಲಿ ಪಂಚನಾಮೆ ಜರುಗಿಸಿ ಮು.ಮಾ 1 ಮತ್ತು 2 ನ್ನು ಪೊಲೀಸರು ನಮ್ಮಗಳ ಮುಂದೆ ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ 5 ರಂತೆ ಕಚ್ಚಾ ನಕಾಶೆ ತಯಾರಿಸಿ , ನಿಪಿ 6 ಮತ್ತು 7 ರಂತೆ ಫೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ– ಆರೋಪಿ ಪರ ವಕೀಲರಿಂದಃ–

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.